ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE :

# ಕಲ್ಲಿದ್ದಲು ಹಗರಣ: ಮಾಜಿ ಕೇಂದ್ರ ಸಚಿವ ದಿಲೀಪ್‌ಗೆ ಜೈಲು

ನವದೆಹಲಿ: ಕಲ್ಲಿದ್ದಲು ಹಗರಣಕ್ಕೆ ಸಂಬಂಧಿಸಿದಂತೆ ವಾಜಪೇಯಿ ಸರ್ಕಾರದಲ್ಲಿ ಮಂತ್ರಿಯಾಗಿದ್ದ ದಿಲೀಪ್ ರಾಯ್‌ಗೆ ಸಿಬಿಐ ಕೋರ್ಟ್ ಸೋಮವಾರ 3 ವರ್ಷ ಜೈಲು ಶಿಕ್ಷೆ ವಿಧಿಸಿದೆ. ಬೆನ್ನಲ್ಲೇ ಅವರಿಗೆ ಜಾಮೀನು ನೀಡಿ, ಮೇಲ್ಮನವಿ ಸಲ್ಲಿಸಲು 1 ತಿಂಗಳ ಕಾಲಾವಕಾಶ ನೀಡಿದೆ. ಜಾರ್ಖಂಡ್‌ನ ಕಲ್ಲಿದ್ದಲು ಗಣಿಗೆ ಸಂಬಂಧಿಸಿದಂತೆ ಸಚಿವರು ಅಕ್ರಮವೆಸಗಿದ ಆರೋಪ ಇದೆ. ವಿವರ ▸ 9

# ಮಾಜಿ ಕೇಂದ್ರ ಸಚಿವ ದಿಲೀಪ್ ರಾಯ್‌ಗೆ 3 ವರ್ಷ ಜೈಲು ಶಿಕ್ಷೆ

## ಕಲ್ಲಿದ್ದಲು ಹಗರಣ | ಮೇಲ್ಮನವಿ ಸಲ್ಲಿಕೆಗಾಗಿ ಜಾಮೀನು

ನವದೆಹಲಿ: ಕಲ್ಲಿದ್ದಲು ಹಗರಣಕ್ಕೆ ಸಂಬಂಧಿಸಿದಂತೆ ಮಾಜಿ ಕೇಂದ್ರ ಸಚಿವ ದಿಲೀಪ್ ರಾಯ್‌ಗೆ ಸಿಬಿಐ ನ್ಯಾಯಾಲಯ ಸೋಮವಾರ 3 ವರ್ಷ ಜೈಲು ಶಿಕ್ಷೆ ವಿಧಿಸಿದೆ. ಬೆನ್ನಲ್ಲೇ ಅವರಿಗೆ ಜಾಮೀನು ನೀಡಿ, ಹೈಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಲು 1 ತಿಂಗಳ ಕಾಲಾವಕಾಶ ನೀಡಿದೆ. ರಾಯ್ ಅವರು ಅಟಲ್ ಬಿಹಾರಿ ವಾಜಪೇಯಿ ಮಂತ್ರಿಮಂಡಲದಲ್ಲಿ ಕಲ್ಲಿದ್ದಲು ಖಾತೆ ರಾಜ್ಯ ಸಚಿವರಾಗಿದ್ದರು. ಈ ವೇಳೆ ಜಾರ್ಖಂಡ್‌ನ ಗಿರಿಧ್ ಜಿಲ್ಲೆಯ ಕಲ್ಲಿದ್ದಲು ಗಣಿ ಹಂಚಿಕೆಗೆ ಸಂಬಂಧಿಸಿದಂತೆ ಅಕ್ರಮ ನಡೆಸಿದ ಆರೋಪ ಅವರ ಮೇಲೆ ಕೇಳಿಬಂದಿತ್ತು.



ಈ ಪ್ರಕರಣದ ವಿಚಾರಣೆ ನಡೆಸಿದ ವಿಶೇಷ ಸಿಬಿಐ ನ್ಯಾಯಾಧೀಶ ಭರತ್ ಪರಾಶರ್ ಅವರು, ಮಾಜಿ ಸಚಿವ ರಾಯ್ ಅವರಿಗೆ 3 ವರ್ಷ ಸಜೆ, 10 ಲಕ್ಷ ದಂಡ ವಿಧಿಸಿದರು. ಜೊತೆಗೆ ರಾಯ್ ಹಾಗೂ ಅವರ ಅವಧಿಯಲ್ಲಿ ಕಲ್ಲಿದ್ದಲು ಸಚಿವಾಲಯದಲ್ಲಿ ಹಿರಿಯ ಅಧಿಕಾರಿಗಳಾಗಿದ್ದ ಪ್ರದೀಪ್ ಕುಮಾರ್ ಬ್ಯಾನರ್ಜಿ, ನಿತ್ಯಾನಂದ ಗೌತಮ್‌ಗೆ ತಲಾ 3 ವರ್ಷ ಶಿಕ್ಷೆ ವಿಧಿಸಿದೆ.